**2 ನೇ ಅಪರ ನ್ಯಾಯಿಕ ದಂಡಾಧಿಕಾರಿ ಮತ್ತು ಜೆಎಂಎಫ್‌ಸಿ ನ್ಯಾಯಾಲಯ**
**ಮಾಗಡಿ**
**ಕ್ರಿಮಿನಲ್ ಪ್ರಕರಣ ಸಂಖ್ಯೆ - 595/2021**
**ಚಾಸಾ - 02 / ಪ್ರಾಸಾ - 03**

| | |
|---|---|
| ಹೆಸರು | **ಪುಟ್ಟರುದ್ರಾರಾಧ್ಯ** |
| ತಂದೆಯ ಹೆಸರು | **ಬಸವರಾಜು** |
| ವಯಸ್ಸು | **30** |
| ಉದ್ಯೋಗ | **ಚಾಲಕ** |
| ವಿಳಾಸ | **ಚುಂಚನಕುಪ್ಪೆ** |

**ದಿನಾಂಕಃ 10-10-2024 ರಂದು** ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದಃ-**

ಈಗ ಸಾಕ್ಷಿಗೆ ನಿಪಿ-1 ನ್ನು ತೋರಿಸಿದ್ದು, ಅದರಲ್ಲಿರುವ ತನ್ನ ಸಹಿಯನ್ನು ಸಾಕ್ಷಿಯು ಗುರುತಿಸಿರುತ್ತಾರೆ. ಸಾಕ್ಷಿಯ ಸಹಿಯನ್ನು ನಿಪಿ-1(ಸಿ) ಎಂದು ಗುರುತಿಸಲಾಯಿತು. ಸುಮಾರು 3 ವರ್ಷಗಳ ಹಿಂದೆ ನಾನು ನನ್ನ ಖಾಸಗಿ ಕೆಲಸದ ನಿಮಿತ್ತ ಪೋ. ಠಾಣೆಗೆ ಹೋಗಿದ್ದಾಗ, ಪೋಲೀಸರು ನನ್ನಿಂದ ನಿಪಿ-1 ಕ್ಕೆ ಸಹಿಯನ್ನು ಪಡೆದುಕೊಂಡರು. ಅಪಘಾತದ ವಿಷಯಕ್ಕೆ ಸಂಬಂಧಿಸಿದಂತೆ ಪೋಲೀಸರು ನನ್ನಿಂದ ನಿಪಿ-1 ಕ್ಕೆ ಸಹಿಯನ್ನು ಪಡೆದುಕೊಂಡರು. ನನ್ನ ಜೊತೆ ನಿಪಿ-1 ಕ್ಕೆ ಪ್ರಾಸಾ-1 ಮತ್ತು 2 ರವರು ಪೋ. ಠಾಣೆಯಲ್ಲಿ ಸಹಿಯನ್ನು ಮಾಡಿದರು. ನನ್ನ ಸಮಕ್ಷಮದಲ್ಲಿ ಪೋಲೀಸರು ಯಾವುದೇ ವಾಹನಗಳನ್ನು ವಶಪಡಿಸಿಕೊಂಡಿರುವುದಿಲ್ಲ. ನಾನು ಈ ಪ್ರಕರಣಕ್ಕೆ ಸಂಬಂಧಿಸಿದಂತೆ ಪೋಲೀಸರಿಗೆ ಯಾವುದೇ ಹೇಳಿಕೆಯನ್ನು ನೀಡಿರುವುದಿಲ್ಲ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ**

**ಮಹಿವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು:- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ:-**

ದಿ.02-11-2020 ರಂದು ಬೆಳಗ್ಗೆ 8 ರಿಂದ 8.45 ಗಂಟೆ ಸಮಯದಲ್ಲಿ ನೀವು ತೋರಿಸಿದ ಜಾಗದಲ್ಲಿ ಪೋಲೀಸರು ನಿಪಿ-1 ರಂತೆ ಪಂಚನಾಮೆಯನ್ನು ಮಾಡಿ ನಿಮ್ಮ, ಪ್ರಾಸಾ-1 ಮತ್ತು ಪ್ರಾಸಾ-2 ರವರ ಸಹಿಯನ್ನು ಪಡೆದುಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಹಿರೋ ಹೋಂಡಾ ಸ್ಪೆಂಡರ್ ದ್ವಿಚಕ್ರವಾಹನ ಸಂ.ಕೆಎ-02-ಎಚ್.ಪಿ-7125 ಮತ್ತು ಟಿಪ್ಪರ್ ಲಾರಿ ಸಂ. ಕೆಎ-02-ಎಹೆಚ್-0162 ನ್ನು ವಶಪಡಿಸಿಕೊಂಡರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ. ಪಂಚನಾಮೆಯನ್ನು ಮಾಡುವ ಸಮಯದಲ್ಲಿ ಪೋಲೀಸರು ಒಂದು ಕಚ್ಚಾ ನಕ್ಷೆಯನ್ನು ತಯಾರು ಮಾಡಿದ್ದರು ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

ಸಾಕ್ಷಿಗೆ ತಾನು ನೀಡಿರುವ ಹೇಳಿಕೆಯ ಭಾಗವಾದ "ನಾನು ಮೇಲ್ಕಂಡ ವಿಳಾಸದಲ್ಲಿ –----------------ಎಂದು ನನ್ನ ಹೇಳಿಕೆಯನ್ನು ನೀಡಿರುತ್ತೇನೆ " ಓದಿ ತಿಳಿಸಲಾಯಿತು. ಸಾಕ್ಷಿಯು ತಾನು ನೀಡಿರುವ ಹೇಳಿಕೆಯನ್ನು ಅಲ್ಲಗಳೆದಿರುತ್ತಾರೆ. ಸದರಿ ಹೇಳಿಕೆಯನ್ನು ನಿಪಿ-8 ಎಂದು ಗುರುತಿಸಲಾಯಿತು. ಸದರಿ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ತಿಳಿದಿದ್ದರೂ ಸಹ ಆರೋಪಿಗೆ ಸಹಾಯ ಮಾಡುವ ಉದ್ದೇಶದಿಂದ ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಾ ಎಂದರೆ ಸಾಕ್ಷಿಯು ಸರಿಯಲ್ಲ ಎನ್ನುತ್ತಾರೆ.

**ಪಾಟೀ ಸವಾಲುಃ- ಆರೋಪಿಯ ಪರ ಶ್ರೀ.ಆರ್. ಟಿ. ಎಂ, ವಕೀಲರಿಂದಃ-**

ಆರೋಪಿಯ ಪರವಾಗಿ ಏನು ಪಾಟೀ ಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**2 ನೇ ಅ. ನ್ಯಾ. ದಂ. ಮತ್ತು ಜೆಎಂಎಫ್‌ಸಿ, ಮಾಗಡಿ.**